# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 12-03-2021 ಪ್ರಶ್ನೆ ಸಂಖ್ಯೆ : 859 (1154)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸಿ.ಎಂ. ಇಬ್ರಾಹಿಂ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 12-03-2021

ಉತ್ತರಿಸುವ ಸಚಿವರು : ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ವಿಷಯ : ಅನ್ವರ್ ಮಾನಪಾಡಿ ವರದಿಯ ಕ್ರಮದ ಕುರಿತು

(ಅ) ಕರ್ನಾಟಕ ರಾಜ್ಯ ವರ್ಕ್ಫ್ ಆಸ್ತಿ ಕಬಳಿಕೆ ಬಗ್ಗೆ ಸಲ್ಲಿಕೆಯಾಗಿರುವ ಅನ್ವರ್ ಮಾನಪಾಡಿ ವರದಿಯ ಸತ್ಯಾಸತ್ಯತೆಯನ್ನು ಸರ್ಕಾರವು ಪರಿಶೀಲಿಸಿದೆಯೇ; ಹೌದಾದಲ್ಲಿ. ತೆಗೆದುಕೊಂಡ ಕ್ರಮವೇನು; ಇಲ್ಲದಿದ್ದಲ್ಲಿ, ಕಾರಣವೇನು;

(ಆ) ವಕ್ಫ್ ಆಸ್ತಿ ಕಬಳಿಕೆ ವರದಿಯಲ್ಲಿ ಆರೋಪಿಸಿರುವವರ ಬಗ್ಗೆ ಸರ್ಕಾರಕ್ಕೆ ಸೂಕ್ತ ಸಾಕ್ಷ್ಯಾಧಾರಗಳು ಸಲ್ಲಿಕೆಯಾಗಿದೆಯೇ;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ವಕ್ಫ್ ಆಸ್ತಿಗಳಿವೆ; ಎಷ್ಟು ಆಸ್ತಿಗಳನ್ನು ಲೀಸ್‌ಗೆ ನೀಡಲಾಗಿದೆ; ಎಷ್ಟು ಆಸ್ತಿಗಳು ವಕ್ಫ್ ಮಂಡಳಿ ನಿರ್ವಹಣೆಯಲ್ಲಿದೆ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ವಕ್ಫ್ ಆಸ್ತಿ ಕಬಳಿಕೆ ತಡೆಯುವ ನಿಟ್ಟಿನಲ್ಲಿ ಸರ್ಕಾರವು ಕ್ರಮ ಕೈಗೊಂಡಿದೆಯೇ? (ಸಂಪೂರ್ಣ ಮಾಹಿತಿ ಒದಗಿಸುವುದು)